596 (702) ಶ್ರೀ ಕೃಷ್ಣ ಪಾಲೇಮಾರ್ ಜೆ (ಸುರತ್ಕಲ್) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರಿ ಆಸ್ಪತ್ರೆಗಳಲ್ಲಿ ಭ್ರಷ್ಟಾಚಾರ ನಿಯಂತ್ರಣಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು?

ಆ) ಕಳೆದ ಎರಡು ವರ್ಷಗಳಲ್ಲಿ ಹರಾತ್ ಧಾಳಿ ಮಾಡಿ ದಾಖಲಿಸಿದ ಪ್ರಕರಣಗಳು ಎಷ್ಟು? ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಎಷ್ಟು ಜನರ ಮೇಲೆ ಕ್ರಮ ಜರುಗಿಸಲಾಗಿದೆ?

ಇ) ಜನ ಸಾಮಾನ್ಯರು ಹೆಚ್ಚಿನ ಸಂಖ್ಯೆಯಲ್ಲಿ ಚಿಕಿತ್ಸೆ ಪಡೆಯುವ ಸರ್ಕಾರಿ ಆಸ್ಪತ್ರೆಗಳು ಭ್ರಷ್ಟಾಚಾರದಂತೆ ಗಂಭೀರ ಪಿಡುಗಿನಿಂದ ಮುಕ್ತವಾಗಿಡಲು ಸರ್ಕಾರ ಕೈಗೊಂಡ ಕ್ರಮವೇನು?

ಶ್ರೀ ಆರ್. ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).

ಅ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಭ್ರಷ್ಟಾಚಾರವನ್ನು ತಡೆಗಟ್ಟಲು ಸಾರ್ವಜನಿಕರ ಮಾಹಿತಿಗಾಗಿ ಆಸ್ಪತ್ರೆಗಳ ಸಿಬ್ಬಂದಿಯವರು ಅಕ್ರಮ ಸಂಭಾವನೆ ಕೇಳಿದಲ್ಲಿ ನೇರವಾಗಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರುಗಳ ಗಮನಕ್ಕೆ ತರಲು ಹಾಗೂ ಹೆಚ್ಚಿನ ಮಾಹಿತಿ ನೀಡಲು ನೇರವಾಗಿ ಲೋಕಾಯುಕ್ತ ಇವರಿಗೆ ಸಂಪರ್ಕಿಸಲು ನಾಮಫಲಕಗಳನ್ನು ಆಸ್ಪತ್ರೆಯ ಮುಖ್ಯ ದ್ವಾರ ಕಛೇರಿಗಳ ಮುಂದೆ ಪ್ರದರ್ಶಿಸಲಾಗಿದೆ

ಇಲಾಖೆಯಲ್ಲಿ ಜಾಗೃತ ಕೋಶ ಚಾಲನೆಯಲ್ಲಿರುತ್ತದೆ

ಇಲಾಖೆಯ ಹಿರಿಯ ಅಧಿಕಾರಿಗಳನ್ನು ವಿಭಾಗೀಯ ವಿಜಿಲೆನ್ಸ್ ಅಧಿಕಾರಿಗಳಾಗಿ ನೇಮಕ ಮಾಡಲಾಗಿರುತ್ತದೆ

ಪ್ರತಿ ಆಸ್ಪತ್ರೆಯಲ್ಲಿಯೂ **ನಾಗರಿಕ ಸನದ್ನು** ಪ್ರದರ್ಶಿಸುವ ವ್ಯವಸ್ಥೆ ಮಾಡಲಾಗಿದ್ದು ಅದರಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಯಾರಿಗೂ ಹಣ ಪಾವತಿ ಮಾಡಬೇಕಾದ ಅವಶ್ಯಕತೆ ಇರುವುದಿಲ್ಲ ಎಂದು ಸ್ಪಷ್ಟವಾಗಿ ನಮೂದಿಸಲಾಗಿದೆ ನಿರ್ದೇಶನಾಲಯದ ಕಾರ್ಯಕ್ರಮ ಅಧಿಕಾರಿಗಳನ್ನು ಪ್ರತಿ ಜಿಲ್ಲೆಗೆ ಒಬ್ಬರಂತೆ ಉಸ್ತುವಾರಿ ಅಧಿಕಾರಿಗಳಾಗಿ ನೇಮಿಸಲಾಗಿರುತ್ತದೆ

ಆ) ಕಳೆದ ಎರಡು ವರ್ಷಗಳಲ್ಲಿ ಹರಾತ್ ಧಾಳಿ ಮಾಡಿ ದಾಖಲಿಸಿದ ಪ್ರಕರಣಗಳ ಸಂಖ್ಯೆ 25 ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ 12 ವೈದ್ಯಾಧಿಕಾರಿಗಳ

ಪೈಕಿ 8 ವೈದ್ಯಾಧಿಕಾರಿಗಳ ಪೈಕಿ 8 ವೈದ್ಯಾಧಿಕಾರಿಗಳನ್ನು ಅಮಾನತ್ತುಗೊಳಿಸಿದ್ದು, ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇದೆ ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಆ ಕು ಕ ಅಧಿಕಾರಿಗಳು ಹರಾತ್ ದಾಳಿ ನಡೆಸಿ ಲಂಚ ಪ್ರಕರಣದ ಆರೋಪದ ಮೇಲೆ 5 ಪ್ರಕರಣಗಳು ಕಂಡು ಬಂದಿದ್ದು 4 ವೈದ್ಯಾಧಿಕಾರಿಗಳನ್ನು ಅಮಾನತ್ತುಗೊಳಿಸಿ ದೋಷಾರೋಪಣೆ ಪಟ್ಟಿಯನ್ನು ಜಾರಿಗೊಳಿಸಲಾಗಿದೆ ಸದರಿ ಪ್ರಕರಣಕ್ಕೆ ನಿವೃತ್ತ ನ್ಯಾಯಾಧೀಶರಿಂದ ಇಲಾಖಾ ವಿಚಾರಣೆ ಪ್ರಕ್ರಿಯೆಯಲ್ಲಿದೆ ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ 13 ಅರೆ–ವೈದ್ಯಕೀಯ ಸಿಬ್ಬಂದಿಗಳು ಇವರುಗಳ ಪೈಕಿ ಒಬ್ಬ ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿದೆ ಉಳಿದ ನೌಕರರನ್ನು ಅಮಾನತ್ತುಗೊಳಿಸಿ ಇಲಾಖಾ ವಿಚಾರಣೆಗೆ ಒಳಪಡಿಸಿ, ವಿಚಾರಣೆ ಮುಗಿದ ನಂತರ ನಿಯಮಾನುಸಾರ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು

ಇ) ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಭ್ರಷ್ಟಾಚಾರವನ್ನು ತಡೆಗಟ್ಟಲು ಸಾರ್ವಜನಿಕರ ಮಾಹಿತಿಗಾಗಿ ಆಸ್ಪತ್ರೆಗಳ ಸಿಬ್ಬಂದಿಯವರು ಅಕ್ರಮ ಸಂಭಾವನೆ ಕೇಳಿದಲ್ಲಿ ನೇರವಾಗಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರುಗಳ ಗಮನಕ್ಕೆ ತರಲು ಹಾಗೂ ಹೆಚ್ಚಿನ ಮಾಹಿತಿ ನೀಡಲು ನೇರವಾಗಿ ಲೋಕಾಯುಕ್ತ ಇವರಿಗೆ ಸಂಪರ್ಕಿಸಲು ನಾಮಫಲಕಗಳನ್ನು ಆಸ್ಪತ್ರೆಯ ಮುಖ್ಯ ದ್ವಾರ ಕಛೇರಿಗಳ ಮುಂದೆ ಪ್ರದರ್ಶಿಸಲಾಗಿದೆ

ಇಲಾಖೆಯಲ್ಲಿ ಜಾಗೃತ ಕೋಶ ಚಾಲನೆಯಲ್ಲಿರುತ್ತದೆ

ಇಲಾಖೆಯ ಹಿರಿಯ ಅಧಿಕಾರಿಗಳನ್ನು ವಿಭಾಗೀಯ ವಿಜಿಲೆನ್ಸ್ ಅಧಿಕಾರಿಗಳಾಗಿ ನೇಮಕ ಮಾಡಲಾಗಿರುತ್ತದೆ

ಪ್ರತಿ ಆಸ್ಪತ್ರೆಯಲ್ಲಿಯೂ ನಾಗರಿಕ ಸನದ್ದು ಪ್ರದರ್ಶಿಸುವ ವ್ಯವಸ್ಥೆ ಮಾಡಲಾಗಿದ್ದು ಅದರಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಯಾರಿಗೂ ಹಣ ಪಾವತಿ ಮಾಡಬೇಕಾದ ಅವಶ್ಯಕತೆ ಇರುವುದಿಲ್ಲ ಎಂದು ಸ್ಪಷ್ಟವಾಗಿ ನಮೂದಿಸಲಾಗಿದೆ ನಿರ್ದೇಶನಾಲಯದ ಕಾರ್ಯಕ್ರಮ ಅಧಿಕಾರಿಗಳನ್ನು ಪ್ರತಿ ಜಿಲ್ಲೆಗೆ ಒಬ್ಬರಂತೆ ಉಸ್ತುವಾರಿ ಅಧಿಕಾರಿಗಳಾಗಿ ನೇಮಿಸಲಾಗಿರುತ್ತದೆ

597 (703) ಶ್ರೀ ಕೃಷ್ಣ ಪಾಲೇಮಾರ್ ಜಿ (ಸುರತ್ಕಲ್) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ ಮತ್ತು ವರ್ಗಗಳ ಡಾ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಹಣಕಾಸು ಮತ್ತು ಶೈಕ್ಷಣಿಕ ಯೋಜನೆಗಳನ್ನು ಪರಿಷ್ಕರಣೆಗೊಳಿಸಲು ಸರ್ಕಾರ ಕ್ರಮ ಜರುಗಿಸಿದೆಯೇ?